**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಮಂಜುನಾಥ್ ಭಂಡಾರಿ ಇವರು ಪ್ರಸ್ತಾಪಿಸಿರುವ ನಿಯಮ 72ರ ಅಡಿಯಲ್ಲಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ:-**

**ಪ್ರಶ್ನೆ:**

ಭಾರತದ ದೇಶಕ್ಕೆ ಸ್ವಾತಂತ್ರ್ಯ ದೊರಕಿಸುವ ನಿಟ್ಟಿನಲ್ಲಿ ಅಹಿಂಸಾ ಮಾರ್ಗದ ಮೂಲಕ ತೊಡಗಿಸಿ ಅದರಲ್ಲಿ ತಮ್ಮ ಅನುಯಾಯಿಗಳೊಂದಿಗೆ ಯಶಸ್ವಿಯಾದ ಗಾಂಧೀಜಿಯವರನ್ನು ಭಾರತದ ರಾಷ್ಟ್ರಪಿತರೆಂದು ಕರೆಯಲಾಗುತ್ತಿದೆ. ಹಾಗೆಯೇ ಭಾರತ ಸ್ವಾತಂತ್ರ್ಯಾ ನಂತರ ಭಾರತದ ಆಡಳಿತ ನಡೆಸಲು ಅಗತ್ಯವಿರುವ ಸಂವಿಧಾನ ರಚನಾ ಸಮಿತಿಯ ಅಧ್ಯಕ್ಷರಾದ ಡಾ॥ ಬಿ.ಆರ್.ಅಂಬೇಡ್ಕರ್ ಪ್ರಪಂಚದ ವಿವಿಧ ಸಂವಿಧಾನಗಳನ್ನು ಅಧ್ಯಯನ ಮಾಡಿ ನಮ್ಮ ದೇಶಕ್ಕೆ ಒಂದು ಒಳ್ಳೆಯ ಸಂವಿಧಾನ ಒದಗಿಸಿ ಕೊಟ್ಟಿದ್ದರು.

ನಮ್ಮ ದೇಶದ ಸ್ವಾತಂತ್ರ್ಯ ಹೋರಾಟದ ಇತಿಹಾಸದಲ್ಲಿ ರಾಷ್ಟ್ರಪಿತ ಮಹಾತ್ಮ ರೆಂದು ಖ್ಯಾತರಾದ ಮೋಹನ್ ದಾಸ್ ಕರಮಚಂದ ಗಾಂಧೀಜಿ ಹಾಗೂ ಭಾರತ ಸಂವಿಧಾನ ಶಿಲ್ಪಿ ಡಾ॥ ಬಿ.ಆರ್.ಅಂಬೇಡ್ಕರ್ ಇವರ ಸಾಧನೆಗಳು ಇಂದಿನ ಪೀಳಿಗೆಯ ವಿದ್ಯಾರ್ಥಿಗಳ ಮನಸಿನಲ್ಲಿ ಅಚ್ಚಳಿಯದೆ ಉಳಿಯುವ ನಿಟ್ಟಿನಲ್ಲಿ ಇವರಿಬ್ಬರ ಪ್ರತಿಮೆಯನ್ನು ರಾಜ್ಯದ ಎಲ್ಲಾ ವಿದ್ಯಾ ಸಂಸ್ಥೆಗಳಲ್ಲಿ ನಿರ್ಮಿಸುವ ಬಗ್ಗೆ ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಮಂತ್ರಿಗಳ ಮೂಲಕ ಸರಕಾರದ ಗಮನ ಸೆಳೆಯಬಯಸುತ್ತೇನೆ.

**ಉತ್ತರ:**

ಗೌರವಾನ್ವಿತ ಸ್ವಾತಂತ್ರ್ಯ ಹೋರಾಟಗಾರರಲ್ಲಿ ಒಬ್ಬರಾದ ಮಹಾತ್ಮ ಗಾಂಧೀಜಿ ರವರ ಜನ್ಮದಿನದ ಸ್ಮರಣಾರ್ಥವಾಗಿ ಅಕ್ಟೋಬರ್ 2 ರಂದು ಗಾಂಧಿ ಜಯಂತಿಯನ್ನು ರಾಜ್ಯದ ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ಆಚರಿಸಲಾಗುತ್ತಿದೆ.

ಆಗಸ್ಟ್ 15 ರಂದು ದೇಶದೆಲ್ಲೆಡೆ ಮತ್ತು ರಾಜ್ಯಾದ್ಯಂತ ಸ್ವಾತಂತ್ರ್ಯ ದಿನಾಚರಣೆಯನ್ನು ಆಚರಿಸುವುದರೊಂದಿಗೆ ಈ ಸಂದರ್ಭದಲ್ಲಿ ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಹಲವು ಮಹಾನ್ ನಾಯಕರುಗಳನ್ನು ಸ್ಮರಿಸಲಾಗುತ್ತದೆ.

ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 7 ಹೆಚ್‌ಪಿಎ 2020 ದಿನಾಂಕ:25.01.2020ರನ್ವಯ ರಾಜ್ಯದ ಎಲ್ಲಾ ಸರ್ಕಾರಿ ಕಛೇರಿಗಳು, ಸರ್ಕಾರಿ ಸ್ವಾಮ್ಯಕ್ಕೆ ಒಳಪಡುವ ಸಂಸ್ಥೆಗಳು ಹಾಗೂ ಸರ್ಕಾರಿ ಶಾಲಾ ಕಾಲೇಜು ಸೇರಿದಂತೆ ಸರ್ಕಾರದ ವತಿಯಿಂದ ನಡೆಯುವ ಗಣರಾಜ್ಯೋತ್ಸವ ಸಮಾರಂಭಗಳಲ್ಲಿ ಸಂವಿಧಾನ ಪಿತಾಮಹ ಭಾರತ ರತ್ನ ಡಾ॥ ಬಿ.ಆರ್ ಅಂಬೇಡ್ಕರ್ ರವರ ಭಾವಚಿತ್ರಕ್ಕೆ ಶಾಲಾ ಕಾಲೇಜುಗಳಲ್ಲಿ ಗೌರವ ಸೂಚಿಸಲಾಗುತ್ತಿದೆ.

ಹೀಗೆ ರಾಜ್ಯದ ಎಲ್ಲಾ ಶಾಲಾ ಕಾಲೇಜುಗಳಲ್ಲಿ ರಾಷ್ಟ್ರೀಯ ಹಬ್ಬಗಳ ಸಂದರ್ಭಗಳಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ಭಾರತ ಸಂವಿಧಾನ ಶಿಲ್ಪಿ ಡಾ॥ ಬಿ.ಆರ್.ಅಂಬೇಡ್ಕರ್ ಸೇರಿದಂತೆ ಅನೇಕ ಸ್ವತಂತ್ರ

ಹೋರಾಟಗಾರರ ಸಾಧನೆಗಳು ಇಂದಿನ ಪೀಳಿಗೆಯ ವಿದ್ಯಾರ್ಥಿಗಳ ಮನಸ್ಸಿನಲ್ಲಿ ಅಚ್ಚಳಿಯದೆ ಉಳಿಯುವ ನಿಟ್ಟಿನಲ್ಲಿ ಇವರುಗಳಿಗೆ ಗೌರವಿಸಲಾಗುತ್ತಿದೆ.

ಮುಂದುವರೆದು, ಸಂತರು, ಶರಣರು, ಸ್ವತಂತ್ರ ಹೋರಾಟಗಾರರು, ಗಣ್ಯ ವ್ಯಕ್ತಿಗಳು ದೇಶಕ್ಕಾಗಿ ಸಲ್ಲಿಸಿದ ಸೇವೆ, ತ್ಯಾಗ, ಮನೋಭಾವಗಳನ್ನು ಸ್ಮರಿಸುವ ಉದ್ದೇಶದಿಂದ ಅಂತಹವರ ಪ್ರತಿಮೆಗಳನ್ನು ಕೆಲವು ಸರ್ಕಾರಿ ಕಛೇರಿಗಳು, ಸಾರ್ವಜನಿಕ ಪ್ರದೇಶಗಳಲ್ಲಿ ಸ್ಥಾಪನೆ ಮಾಡಲಾಗಿದ್ದು, ಇಂತಹ ಪ್ರತಿಮೆಗಳನ್ನು ಸಮರ್ಪಕವಾಗಿ ನಿರ್ವಹಿಸದೇ ಇರುವುದು, ವಿರೂಪಗೊಂಡಿರುವುದು ಹಾಗೂ ಇನ್ನಿತರೆ ಅಹಿತಕರ ಘಟನೆಗಳು ಸಂಭವಿಸಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಆದ್ದರಿಂದ, ಸರ್ಕಾರದ ಸುತ್ತೋಲೆ ಸಂಖ್ಯೆ:ಕಸಂವಾಪ್ರ 564 ಕಸಧ 2012, ದಿನಾಂಕ:11.06.2012ರನ್ವಯ ಸರ್ಕಾರದ/ ಸಾರ್ವಜನಿಕ ಜಾಗದಲ್ಲಿ ಯಾವುದೇ ಸಂತರ/ಶರಣರ, ಜನನಾಯಕರ, ಸ್ವತಂತ್ರ ಹೋರಾಟಗಾರರ ಅಥವಾ ಗಣ್ಯ ವ್ಯಕ್ತಿಗಳ ಪ್ರತಿಮೆಗಳನ್ನು ಸ್ಥಾಪಿಸುವುದನ್ನು ನಿರ್ಬಂಧಿಸಲಾಗಿದೆ. (ಅನುಬಂಧದಲ್ಲಿ ಒದಗಿಸಿದೆ)

ಆದುದರಿಂದ, ವಿದ್ಯಾಸಂಸ್ಥೆಗಳಲ್ಲಿ ಯಾವುದೇ ಗಣ್ಯ ವ್ಯಕ್ತಿಗಳ ಪ್ರತಿಮೆಗಳನ್ನು ಸ್ಥಾಪಿಸುವುದಕ್ಕೆ ಅವಕಾಶವಿರುವುದಿಲ್ಲ.

**ಇಪಿ 32 ಎಂಪಿಇ 2023**

(ಎಸ್.ಮಧುಬಂಗಾರಪ್ಪ)

**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**